ಕರ್ನಾಟಕ ಸರ್ಕಾರದ ನಡವಳಿಗಳು

ಜಲ ಸಂಪನ್ಮೂಲ ಇಲಾಖೆ

**ವಿಷಯ:-** ಹಾವೇರಿ ಜಿಲ್ಲೆಯ, ಹಿರೇಕೆರೂರು ಮತ್ತು ರಟ್ಟಿಹಳ್ಳಿ ತಾಲ್ಲೂಕಿನ 77 ಕೆರೆಗಳನ್ನು ತುಂಗಭದ್ರಾ ನದಿಯಿಂದ ತುಂಬಿಸುವ ರೂ.185.00ಕೋಟಿಗಳ ವಿವರವಾದ ಯೋಜನಾ ವರದಿಗೆ (ಸರ್ವಜ್ಞ ಕೆರೆ ಯೋಜನೆ), ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:-** ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ:ಕೆಎನ್.ಎನ್/ಸರ್ವಜ್ಞ ಏನೀಯೋ ಡಿಪಿಆರ್/2019-20/3384, ದಿನಾಂಕ:30.09.2019.

----***----

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ಹಾವೇರಿ ಜಿಲ್ಲೆಯ, ಹಿರೇಕೆರೂರು ಮತ್ತು ರಟ್ಟಿಹಳ್ಳಿ ತಾಲ್ಲೂಕಿನ 77 ಕೆರೆಗಳನ್ನು ತುಂಗಭದ್ರಾ ನದಿಯಿಂದ ನೀರನ್ನೆತ್ತಿ ತುಂಬಿಸಿ ಆ ಪ್ರದೇಶದ ಅಂತರ್ಜಲ ಮಟ್ಟವನ್ನು ಹೆಚ್ಚಿಸಲು ಹಾಗೂ ಕುಡಿಯುವ ನೀರಿನ ಬವಣೆಯನ್ನು ನೀಗಿಸಲು ಪ್ರಸ್ತಾಪಿತ ಸರ್ವಜ್ಞ ಕೆರೆ ಯೋಜನೆಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ರವರು ತಿಳಿಸಿರುತ್ತಾರೆ.

ಮೇಲ್ಕಂಡ ಯೋಜನೆಯ ವಿವರವಾದ ಯೋಜನಾ ವರದಿಯನ್ನು ದಿನಾಂಕ:11.09.2019 ರಂದು ಜರುಗಿದ ಕರ್ನಾಟಕ ನೀರಾವರಿ ನಿಗಮದ ಅಂದಾಜು ಪರಿಶೀಲನಾ ಸಮಿತಿಯ 59ನೇ ಸಭೆಯಲ್ಲಿ ಮಂಡಿಸಲಾಗಿ, ಸಮಿತಿಯು ಯೋಜನೆಗೆ ನಿರ್ದೇಶಕರ ಮಂಡಳಿಯ ಅನುಮೋದನೆ ಪಡೆದು, ಸರ್ಕಾರಕ್ಕೆ ಆಡಳಿತಾತ್ಮಕ ಅನುಮೋದನೆಗೆ ಸಲ್ಲಿಸಲು ಶಿಫಾರಸ್ಸು ಮಾಡಿರುತ್ತದೆ, ಎಂದು ವ್ಯವಸ್ಥಾಪಕ ನಿರ್ದೇಶಕರು, ತಿಳಿಸಿರುತ್ತಾರೆ.

ಮುಂದುವರೆದು, ಯೋಜನೆಯ ವಿವರವಾದ ಯೋಜನಾ ವರದಿಯನ್ನು, ದಿನಾಂಕ:20.09.2019 ರಂದು ಜರುಗಿದ ಕರ್ನಾಟಕ ನೀರಾವರಿ ನಿಗಮದ ನಿರ್ದೇಶಕರ ಮಂಡಳಿಯ 90ನೇ ಸಭೆಯಲ್ಲಿ ಮಂಡಿಸಲಾಗಿ, ಮಂಡಳಿಯು ಸದರಿ ಪ್ರಸ್ತಾವನೆಗೆ ಅನುಮೋದನೆ ನೀಡಿ, ಆಡಳಿತಾತ್ಮಕ ಅನುಮೋದನೆಗಾಗಿ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತದೆ ಎಂದು ತಿಳಿಸಿ, ಹಾವೇರಿ ಜಿಲ್ಲೆಯ, ಹಿರೇಕೆರೂರು ಮತ್ತು ರಟ್ಟಿಹಳ್ಳಿ ತಾಲ್ಲೂಕಿನ 77 ಕೆರೆಗಳನ್ನು ತುಂಗಭದ್ರಾ ನದಿಯಿಂದ ತುಂಬಿಸುವ 2018-19ನೇ ಸಾಲಿನ ದರಪಟ್ಟಿಯನ್ನಾಧರಿಸಿ ತಯಾರಿಸಿರುವ ರೂ.185.00 ಕೋಟಿಗಳ ವಿವರವಾದ ಯೋಜನಾ ವರದಿಗೆ (ಸರ್ವಜ್ಞ ಕೆರೆ ಯೋಜನೆ), ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ನೀರಾವರಿ ನಿಗಮ ರವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 04 ಎಂಎಂಬಿ 2019, ಬೆಂಗಳೂರು, ದಿನಾಂಕ:25.10.2019.**

ಹಾವೇರಿ ಜಿಲ್ಲೆಯ, ಹಿರೇಕೆರೂರು ಮತ್ತು ರಟ್ಟಿಹಳ್ಳಿ ತಾಲ್ಲೂಕಿನ 77 (ಎಪ್ಪತ್ತೇಳು) ಕೆರೆಗಳನ್ನು ತುಂಗಭದ್ರಾ ನದಿಯಿಂದ ತುಂಬಿಸುವ (ಸರ್ವಜ್ಞ ಕೆರೆ ಯೋಜನೆ) 2018-19ನೇ ಸಾಲಿನ

...2

ದರಪಟ್ಟಿಯನ್ವಯ ತಯಾರಿಸಲಾದ ರೂ.185.00 ಕೋಟಿಗಳ (ಒಂದು ನೂರ ಎಂಬತ್ತೈದು ಕೋಟಿ ರೂಪಾಯಿಗಳು ಮಾತ್ರ) ವಿವರವಾದ ಯೋಜನಾ ವರದಿಗೆ ತಾತ್ವಿಕ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 578 ಆಕೋ-1/2019 ದಿನಾಂಕ:19.10.2019 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

25/10/19

(ಶ್ರೀಹರಿ ಎಸ್.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1).
ಜಲ ಸಂಪನ್ಮೂಲ ಇಲಾಖೆ

ಇವರಿಗೆ:

1) ಪ್ರಧಾನ ಮಹಾಲೇಖಾಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
2) ಪ್ರಧಾನ ಮಹಾಲೇಖಾಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
3) ಪ್ರಧಾನ ಮಹಾಲೇಖಾಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ), ಕರ್ನಾಟಕ ಬೆಂಗಳೂರು 01.
4) ಸರ್ಕಾರದ ಉಪಕಾರ್ಯದರ್ಶಿಗಳು (ಸಚಿವ ಸಂಪುಟ), ಪ್ರಕರಣ ಸಂ:ಸಿ: 605/2019, ದಿನಾಂಕ:22.10.2019 ರನ್ವಯ ಕಳುಹಿಸಿದೆ.
5) ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
6) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಬೆಂಗಳೂರು.
7) ಮುಖ್ಯ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ವಲಯ ಶಿವಮೊಗ್ಗ.
8) ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ ಬೆಂಗಳೂರು.
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.